**File No.DPARAR/06/K1V/2019_DPARAR_INS_1_2-DPAR AR SEC**

## <u>ಕರ್ನಾಟಕ ಸರ್ಕಾರ</u>

ಸಂಖ್ಯೆ:ಸಿಆಸುಇ 06 ಕತವ 2019

ಕರ್ನಾಟಕ ಸರ್ಕಾರದ ಸಚಿವಾಲಯ
6ನೇ ಮಹಡಿ , 2ನೇ ಹಂತ
ಬಹುಮಹಡಿಗಳ ಕಟ್ಟಡ
ಬೆಂಗಳೂರು,ದಿನಾಂಕ 11/03/2019

## <u>ಸುತ್ತೋಲೆ</u>

**ವಿಷಯ** ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ Bio Metric ಹಾಜರಾತಿ ಪದ್ಧತಿಯನ್ನು ಅಳವಡಿಸುವ ಬಗ್ಗೆ.

**************

ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಈಗಾಗಲೇ ಸರ್ಕಾರಿ ಅಧಿಕಾರಿಗಳಿಗೆ ಹಾಗೂ ನೌಕರರುಗಳಿಗೆ ಹಾಜರಾತಿ ಪದ್ಧತಿಯನ್ನು ಬಯೋಮೆಟ್ರಿಕ್ ಮೂಲಕ ಅಳವಡಿಸಲಾಗಿದ್ದು, ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿಯನ್ನು ಅಳವಡಿಸುವ ಕುರಿತು ಸುತ್ತೋಲೆ ಸಂಖ್ಯೆ ಸಿಆಸುಇ 29 ತವಇ 2012, ದಿನಾಂಕ 04 09 2013ರಲ್ಲಿ ಸೂಚನೆಗಳನ್ನು ನೀಡಿದ್ದು, ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ ಆದಾಗ್ಯೂ ಕೆಲವೊಂದು ಕಚೇರಿಗಳಲ್ಲಿ ಮಾತ್ರ ಅಳವಡಿಸಲಾಗಿದ್ದು, ಇನ್ನು ಕೆಲವು ಕಚೇರಿಗಳಲ್ಲಿ ಯಾವುದೇ ಕ್ರಮ ವಹಿಸಿರುವುದಿಲ್ಲ.

ಆದ್ದರಿಂದ ಸುತ್ತೋಲೆ ಸಂಖ್ಯೆ.ಸಿಆಸುಇ 29 ತವಇ 2012, ದಿನಾಂಕ 04 09 2013ರಲ್ಲಿನ ಸೂಚನೆಗಳನ್ನು ಗಮನದಲ್ಲಿಟ್ಟುಕೊಂಡು ದಿನಾಂಕ 01 05 2019ರಿಂದ ಜಾರಿಗೆ ಬರುವಂತೆ ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿ ಹಾಗೂ ನೌಕರರುಗಳಿಗೆ ಹಾಜರಾತಿ ಪದ್ಧತಿಯನ್ನು ಬಯೋಮೆಟ್ರಿಕ್ ಮೂಲಕ ಅಳವಡಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ

11/3/19
(ಸ್ವರ್ಣಲತಾ ಎಂ ಭಂಡಾರೆ)
ಸರ್ಕಾರದ ಉಪ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)
11/3/19

**<u>ಇವರಿಗೆ</u>:**
ರಾಜ್ಯದ ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ

**<u>ಪ್ರತಿ</u>:**

1 ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ /ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು ಇವರಿಗೆ ಕಳುಹಿಸುತ್ತಾ, ತಮ್ಮ ಅಧೀನದಲ್ಲಿ ಬರುವ ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಈ ಮೂಲಕ ಕಟ್ಟುನಿಟ್ಟಿನ ಸೂಚನೆ ನೀಡುವಂತೆ ಹಾಗೂ ಅನುಪಾಲನಾ ವರದಿ ಸಲ್ಲಿಸುವಂತೆ ಕೋರಿದೆ

2 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,ಸಿಆಸುಇ (ಇ-ಆಡಳಿತ), ಬಹುಮಹಡಿ ಕಟ್ಟಡ

3 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ,ಸಿಆಸುಇ(ಆಸು) ಬಹುಮಹಡಿ ಕಟ್ಟಡ

4 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು,ಸಿಆಸುಇ(ಆಸು) ಬಹುಮಹಡಿ ಕಟ್ಟಡ

5 ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

ಸಂಖ್ಯೆ ಸಿಆಸುಇ 29 ಸೇಸ 2012

# ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರದ ಸಚಿವಾಲಯ,
6ನೇ ಮಹಡಿ, 2ನೇ ಹಂತ,
ಕೊಠಡಿ ಸಂಖ್ಯೆ607, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 04/09/2013.

## ಸುತ್ತೋಲೆ

**ವಿಷಯ :** ಸಚಿವಾಲಯದಲ್ಲಿರುವಂತೆ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ Bio-Metric ಹಾಜರಾತಿ ಪದ್ಧತಿಯನ್ನು ಅಳವಡಿಸುವ ಬಗ್ಗೆ

=====

ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಈಗಾಗಲೇ ಸರ್ಕಾರಿ ಅಧಿಕಾರಿಗಳಿಗೆ/ನೌಕರರಿಗೆ ಹಾಜರಾತಿಯ ಪದ್ಧತಿಯನ್ನು ಬಯೋಮೆಟ್ರಿಕ್ ಮೂಲಕ ಅಳವಡಿಸಿರುವುದು ಸರಿಯಷ್ಟೆ. ಸದರಿ ಬಯೋಮೆಟ್ರಿಕ್ ಪದ್ಧತಿಯು ಇಲ್ಲದೇ ಇರುವ ಕಛೇರಿಯಲ್ಲಿ, ಅಧಿಕಾರಿ/ನೌಕರರ ಹಾಜರಾತಿಯಲ್ಲಿ ಏರುಪೇರು, ಕಛೇರಿಯ ಕಾರ್ಯನಿರ್ವಹಣೆಯಲ್ಲಿ ಹಾಗೂ ಶಿಸ್ತು ಪಾಲನೆಯಲ್ಲಿ ಕೊರತೆ ಕಂಡು ಬಂದಿರುತ್ತದೆ. ಆದ್ದರಿಂದ ಬಯೋಮೆಟ್ರಿಕ್ ಪದ್ಧತಿಯನ್ನು ಇತರ ಇಲಾಖೆಗಳಲ್ಲಿ ಅಳವಡಿಸುವಂತೆ ಕ್ರಮವಹಿಸಬೇಕಾಗಿರುವ ಅವಶ್ಯಕತೆಯನ್ನು ಮನಗಂಡಿದೆ.

ಹಾಗಾಗಿ ಸಚಿವಾಲಯದಲ್ಲಿರುವಂತೆಯೇ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಬಯೋಮೆಟ್ರಿಕ್ ಅಳವಡಿಸುವುದನ್ನು ಜಾರಿಗೊಳಿಸಲು ಉದ್ದೇಶಿಸಿದ್ದು, ಈ ಕೆಳಕಂಡ ಸೂಚನೆಗಳನ್ನು ತಪ್ಪದೇ ಕಟ್ಟು ನಿಟ್ಟಾಗಿ ಪಾಲಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ

1. ಬಯೋಮೆಟ್ರಿಕ್ ಪದ್ಧತಿಯನ್ನು ಎಲ್ಲಾ ಕಛೇರಿಗಳಲ್ಲಿ ಡಿ. ನವೆಂಬರ್ 2013ರಿಂದ ಜಾರಿಗೆ ಬರುವಂತೆ ಕಡ್ಡಾಯವಾಗಿ ಅನುಷ್ಠಾನಿಸಲು ಕ್ರಮಕೈಗೊಳ್ಳುವುದು.
2. ಬಯೋಮೆಟ್ರಿಕ್ ಪದ್ಧತಿಯನ್ನು ಅಳವಡಿಸಲು ತಗಲುವ ವೆಚ್ಚವನ್ನು ಆಯಾ ಇಲಾಖೆಗೆ ನಿಗದಿಪಡಿಸಲಾದ ಆಯವ್ಯಯದಿಂದ ಭರಿಸುವುದು.
3. ಎಲ್ಲಾ ಇಲಾಖೆಗಳು ತಮ್ಮ ಸಿಬ್ಬಂದಿಗಳ ಸಂಖ್ಯೆಗನುಗುಣವಾಗಿ ರೀಡರ್‌ನ್ನು ಖರೀದಿಸತಕ್ಕದ್ದು. ಇದರೊಂದಿಗೆ ಗಣಕಯಂತ್ರ, ಅಂತರ್ಜಾಲ ಸಂಪರ್ಕ ವ್ಯವಸ್ಥೆಯನ್ನು ಕಲ್ಪಿಸ ಬೇಕಾಗುತ್ತದೆ. ಸದರಿ ಪರಿಕರಗಳನ್ನು ಇ-ಆಡಳಿತ ಇಲಾಖೆಯು ಗುರುತಿಸಿರುವ ಮಾರಾಟಗಾರರಿಂದ (empanelled vendors) ಖರೀದಿಸತಕ್ಕದ್ದು.
4. ಸದರಿ ಬಯೋಮೆಟ್ರಿಕ್ ಉಪಕರಣಗಳನ್ನು ಖರೀದಿಸಲು ಕರ್ನಾಟಕ ಸಾರ್ವಜನಿಕ ಪಾರದರ್ಶಕತಾ ಕಾಯ್ದೆಯನ್ನು ಪಾಲಿಸತಕ್ಕದ್ದು.
5. ಇದಕ್ಕೆ ಬೇಕಾಗುವ ತಂತ್ರಾಂಶವನ್ನು NIC/e-Governance ಇಲಾಖೆಯವರಿಂದ ಪಡೆಯತಕ್ಕದ್ದು. ಬಯೋಮೆಟ್ರಿಕ್ ಪದ್ಧತಿಯನ್ನು ತಮ್ಮ ಕಛೇರಿಗಳಲ್ಲಿ ಅನುಷ್ಠಾನಗೊಳಿಸಲು ಸಿಸ್ಟಂ ಅನಾಲಿಸ್ಟ್ ಹಾಗೂ ಪ್ರೋಗ್ರಾಮರ್ ಸೇವೆಯನ್ನು ತಾತ್ಕಾಲಿಕವಾಗಿ ಸಿಆಸುಇ ಇ-ಆಡಳಿತ ಇಲಾಖೆಯ ಮೂಲಕ ಪಡೆಯಲು ಇಲಾಖೆಗಳಿಗೆ ತಿಳಿಸಲಾಗಿದೆ.

(ಡಾ: ಶಾಲಿನಿ ರಜನೀಶ್)
ಸರ್ಕಾರದ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)
(ನಾಗರೀಕ ಸೇವೆಗಳು ಮತ್ತು ರಾಜಕೀಯ ವಿಶ್ರಾಂತಿ ವೇತನ-2)

**ಇವರಿಗೆ:**
ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ,

ಪ್ರತಿ

1. ಸರ್ಕಾರದ ಪ್ರಧಾನ ಕಾರ್ಯದರ್ಶಿ ಸಿಆಸುಇ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು,(ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲ) ಆರ್ಥಿಕ ಇಲಾಖೆ